## ಕರ್ನಾಟಕ ಸರ್ಕಾರ

ಸಂಖ್ಯೆ: ಕೌಉಜೀಇ 68 ಕೈತಸೇ 2022

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11/04/2022.

## ಸುತ್ತೋಲೆ

**ವಿಷಯ:** ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಗ್ರೂಪ್-ಎ ಅಧಿಕಾರಿಗಳು ತಮ್ಮ ಆಸ್ತಿ ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 45 ಸೇನಿಸಿ 2021, ದಿನಾಂಕ: 10.12.2021.

******

ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966 ರ ನಿಯಮಗಳು ಪರಿಷ್ಕೃತವಾಗಿ ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021, ದಿನಾಂಕ: 07.01.2021 ರಿಂದ ಜಾರಿಗೆ ಬಂದಿರುತ್ತವೆ, ಸದರಿ ನಿಯಮಗಳ ನಿಯಮ 24 ರಲ್ಲಿ ಸರ್ಕಾರಿ ನೌಕರರು ಚರ / ಸ್ಥಿರ ಆಸ್ತಿ ಖರೀದಿ / ವಿಲೇ ಮಾಡುವುದಕ್ಕೆ ಸಂಬಂಧಿಸಿದಂತೆ ಉಪಬಂಧಗಳನ್ನು ಕಲ್ಪಿಸಲಾಗಿದೆ.

ಪ್ರತಿಯೊಬ್ಬ ಸರ್ಕಾರಿ ನೌಕರನು ಯಾವುದಾದರೂ ಸೇವೆಗೆ ಅಥವಾ ಹುದ್ದೆಗೆ ಮೊದಲು ನೇಮಕವಾಗುವಾಗ, ಆತನು ತನ್ನ ಸ್ವಂತ ಹೆಸರಿನಲ್ಲಾಗಲಿ ಅಥವಾ ತನ್ನ ಕುಟುಂಬದ ಯಾರೇ ಸದಸ್ಯರ ಹೆಸರಿನಲ್ಲಾಗಲಿ ಅಥವಾ ಯಾವುದೇ ಇತರ ವ್ಯಕ್ತಿಯ ಹೆಸರಿನಲ್ಲಾಗಲಿ ಪಿತ್ರಾರ್ಜಿತವಾಗಿ ಬಂದ ಸ್ವಯಂ ಅರ್ಜಿಸಿದ ಅಥವಾ ಗುತ್ತಿಗೆ ಅಥವಾ ಅಡಮಾನದ ಮೇಲೆ ತಾನು ಹೊಂದಿರುವ ಸ್ಥಿರಾಸ್ತಿಯು ಸಂಪೂರ್ಣ ವಿವರಗಳನ್ನು ನೀಡಿ ನಿಗದಿತ ನಮೂನೆಯಲ್ಲಿ ತನ್ನ ಚರ ಮತ್ತು ಸ್ಥಿರಾಸ್ತಿಗಳ ವಿವರ ಪಟ್ಟಿಯನ್ನು ಪೂರಕ ದಾಖಲೆಗಳೊಂದಿಗೆ ಮೂರು ತಿಂಗಳೊಳಗೆ ಸಲ್ಲಿಸಬೇಕಾಗಿರುತ್ತದೆ. ತರುವಾಯ ಸರ್ಕಾರಿ ನೌಕರನು ಡಿಸೆಂಬರ್ 31ಕ್ಕೆ ಅಂತ್ಯಗೊಳ್ಳುವ ಪ್ರತಿ ಹನ್ನೆರಡು ತಿಂಗಳಿಗೊಮ್ಮೆ ತನ್ನ ಮತ್ತು ತನ್ನ ಕುಟುಂಬದ ಎಲ್ಲ ಸದಸ್ಯರ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ವಾರ್ಷಿಕ ವಿವರ ಪಟ್ಟಿಯನ್ನು ಸಲ್ಲಿಸಬೇಕಾಗಿರುತ್ತದೆ. ಅಲ್ಲದೇ, ನಿಯಮ 24 ರಲ್ಲಿನ ಉಪಬಂಧಗಳಂತೆ ಪ್ರತಿಯೊಬ್ಬ ಸರ್ಕಾರಿ ನೌಕರನು ಚರ ಮತ್ತು ಸ್ಥಿರಾಸ್ತಿಗೆ ಸಂಬಂಧಿಸಿದಂತೆ ನಿಯಮಗಳಲ್ಲಿ ತಿಳಿಸಿರುವ ಸಂದರ್ಭಗಳಲ್ಲಿ ಅನುಮತಿ ಪಡೆಯುವುದು ಹಾಗೂ ವರದಿ ಮಾಡುವುದು ಅವಶ್ಯವಾಗಿರುತ್ತದೆ.

ಆಸ್ತಿ ಮತ್ತು ಹೊಣೆಗಾರಿಕೆ ವಿವರಗಳನ್ನು ಸಲ್ಲಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಕರ್ತವ್ಯವಾಗಿದ್ದು, ನಿಯಮಗಳಲ್ಲಿ ನಿಗದಿಪಡಿಸಿರುವ ಸಮಯದಲ್ಲಿ ಸಲ್ಲಿಸುವುದು ಸಹ ಅಗತ್ಯವಾಗಿರುತ್ತದೆ. ಇಲ್ಲವಾದಲ್ಲಿ ನಡತೆ ನಿಯಮಗಳಿಗೆ ವ್ಯತಿರಿಕ್ತ ನಡವಳಿಕೆ ಪ್ರದರ್ಶಿಸಿದ ಕಾರಣ ಅಂತಹ ಸರ್ಕಾರಿ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅವಕಾಶವಿರುತ್ತದೆ. ಆದಾಗ್ಯೂ ಬಹುತೇಕ ಸರ್ಕಾರಿ ನೌಕರರು ತಮ್ಮ ಆಸ್ತಿ ಮತ್ತು ಹೊಣೆಗಾರಿಕೆಗಳ ವಿವರ ಪಟ್ಟಿಗಳನ್ನು ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಎಲ್ಲಾ ನೌಕರರು ತಮ್ಮ ಚರ ಮತ್ತು ಸ್ಥಿರಾಸ್ತಿ ವ್ಯವಹರಣೆಗೆ ಸಂಬಂಧಿಸಿದಂತೆ ನಿಯಮಾನುಸಾರ ನಿಗದಿತ ಸಮಯಕ್ಕೆ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ.

--2

ಈ ಹಿನ್ನಲೆಯಲ್ಲಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಗ್ರೂಪ್-ಎ ಅಧಿಕಾರಿಗಳು (ಅನ್ಯ ಇಲಾಖೆಯಲ್ಲಿ ನಿಯೋಜನೆಗೊಂಡ ಅಧಿಕಾರಿಗಳನ್ನು ಒಳಗೊಂಡಂತೆ) ತಮ್ಮ ಚರ ಮತ್ತು ಸ್ಥಿರಾಸ್ತಿಗಳ ವಿವರಗಳನ್ನು ಇದುವರೆಗೂ ಸಲ್ಲಿಸುತ್ತಿದ್ದ ಮಾರ್ಚ್-31 ಕ್ಕೆ ಅಂತ್ಯಗೊಳ್ಳುವ ಪ್ರತಿ 12 ತಿಂಗಳಿಗೊಮ್ಮೆ ಅನ್ನುವುದಕ್ಕೆ ಬದಲಾಗಿ ಇನ್ನು ಮುಂದೆ ಡಿಸೆಂಬರ್-31ಕ್ಕೆ ಅಂತ್ಯಗೊಳ್ಳುವ ಪ್ರತಿ 12 ತಿಂಗಳಿಗೊಮ್ಮೆ ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಿಸಿದ ಮೇಲಾಧಿಕಾರಿಗಳ ಮುಖಾಂತರ ಸಲ್ಲಿಸತಕ್ಕದ್ದು ಎಂದು ಈ ಮೂಲಕ ಸೂಚಿಸಿದೆ.

ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಇಲಾಖೆಯ ಗ್ರೂಪ್-ಎ ಅಧಿಕಾರಿಗಳು (ಅನ್ಯ ಇಲಾಖೆಯಲ್ಲಿ ನಿಯೋಜನೆಗೊಂಡ ಅಧಿಕಾರಿಗಳನ್ನು ಒಳಗೊಂಡಂತೆ) ತಮ್ಮ ಆಸ್ತಿ ಹೊಣೆಗಾರಿಕೆಗಳನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 45 ಸೇನಿಸಿ 2021, ದಿನಾಂಕ: 10.12.2021 ರನ್ವಯ ಸಕ್ಷಮ ಪ್ರಾಧಿಕಾರವಾದ ಸರ್ಕಾರಕ್ಕೆ ನಿಗದಿತ ಅವಧಿಯೊಳಗೆ ಸಲ್ಲಿಸತಕ್ಕದ್ದು, ಇಲ್ಲದಿದ್ದ ಪಕ್ಷದಲ್ಲಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ರೀತ್ಯಾ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುವುದು.

ಈ ಸುತ್ತೋಲೆಯನ್ವಯ ಎಲ್ಲಾ ಕಛೇರಿಯ ಮುಖ್ಯಸ್ಥರುಗಳು ಸುತ್ತೋಲೆಯಲ್ಲಿರುವ ಅಂಶಗಳನ್ನು ಅವರ ನಿಯಂತ್ರಣದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳ ಗಮನಕ್ಕೆ ತಂದು ನಿಗದಿತ ಸಮಯದಲ್ಲಿ ಆಸ್ತಿ ಮತ್ತು ಋಣ ಪಟ್ಟಿಗಳನ್ನು ಸಕ್ಷಮ ಪ್ರಾಧಿಕಾರ / ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸುವುದು.

11/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

11/04/2022

**ಇವರಿಗೆ:-**

1. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ಜಂಟಿ ನಿರ್ದೇಶಕರು, ವಿಭಾಗೀಯ ಕಚೇರಿ, ಬೆಂಗಳೂರು / ಮೈಸೂರು / ಹುಬ್ಬಳ್ಳಿ / ಕಲಬುರಗಿ.
4. ಸಂಬಂಧಪಟ್ಟ ಅಧಿಕಾರಿಗಳಿಗೆ (ಆಯುಕ್ತರ ಮುಖಾಂತರ).
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.